## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕೊಡವ ಜನಾಂಗದ ಶ್ರೇಯೋಭಿವೃದ್ಧಿಗಾಗಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:-** 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ:173

********

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ 2022-23ನೇ ಸಾಲಿನ ಆಯವ್ಯಯ ಭಾಷಣದ **"ಕಂಡಿಕೆ- 173 ರಲ್ಲಿ ಕೊಡವ ಜನಾಂಗದ ಶ್ರೇಯೋಭಿವೃದ್ಧಿಗಾಗಿ ರೂ.10.00 ಕೋಟಿ ಮೊತ್ತದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುವುದು"** ಎಂದು ಘೋಷಿಸಲಾಗಿರುತ್ತದೆ.

2022-23ನೇ ಸಾಲಿನ ಆಯವ್ಯಯದಲ್ಲಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಕ್ಕೆ ಲೆಕ್ಕಶೀರ್ಷಿಕೆ:2225-03-190-0-04 ರಲ್ಲಿ ರೂ.100.00 ಕೋಟಿಗಳನ್ನು ಒದಗಿಸಲಾಗಿದೆ. ಸದರಿ ಅನುದಾನದಲ್ಲಿಯೇ ಕೊಡವ ಜನಾಂಗದ ಶ್ರೇಯೋಭಿವೃದ್ಧಿಗಾಗಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಬೇಕಾಗಿರುತ್ತದೆ.

ಮೇಲೆ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 232 ಬಿಎಂಎಸ್ 2022**
**ಬೆಂಗಳೂರು, ದಿನಾಂಕ:11-04-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-173 ರಲ್ಲಿ **"ಕೊಡವ ಜನಾಂಗದ ಶ್ರೇಯೋಭಿವೃದ್ಧಿಗಾಗಿ ರೂ.10.00 ಕೋಟಿ ಮೊತ್ತದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುವುದು"** ಎಂದು ಘೋಷಿಸಿರುವಂತೆ ಈ ಘೋಷಣೆಯ ಅನುಷ್ಠಾನಕ್ಕೆ ಸರ್ಕಾರವು 2022-23ನೇ ಸಾಲಿನಲ್ಲಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಕ್ಕೆ ಲೆಕ್ಕಶೀರ್ಷಿಕೆ:2225-03-190-0-04 ರಲ್ಲಿ ಒದಗಿಸಿರುವ ರೂ.100.00 ಕೋಟಿಗಳ ಅನುದಾನದಲ್ಲಿಯೇ ರೂ.10.00 ಕೋಟಿಗಳ ಅನುದಾನಕ್ಕೆ ಕೊಡವ ಜನಾಂಗದ ಶ್ರೇಯೋಭಿವೃದ್ಧಿಗಾಗಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಆದೇಶಿಸಿದೆ.

ಕೊಡವ ಜನಾಂಗದ ಅಭಿವೃದ್ಧಿಗಾಗಿ ಕ್ರಿಯಾ ಯೋಜನೆ ರೂಪಿಸಿ ನಿಗಮದ ಆಡಳಿತ ಮಂಡಳಿ ಸಭೆಯಲ್ಲಿ ಚರ್ಚಿಸಿ ಅನುಮೋದನೆ ಪಡೆದು ಕೂಡಲೇ ಸಲ್ಲಿಸಲು ವ್ಯವಸ್ಥಾಪಕ ನಿರ್ದೇಶಕರು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರಿಗೆ ಸೂಚಿಸಿದೆ.

ಈ ಆದೇಶವನ್ನು ಮಾನ್ಯ ಇಲಾಖಾ ಸಚಿವರ ಅನುಮೋದನೆಯೊಂದಿಗೆ ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 243 ವೆಚ್ಚ-3/2022 ದಿನಾಂಕ:08.04.2022 ರಲ್ಲಿ ನೀಡಿರುವ

...2

11/04/22

ಸಹಮತಿಯೊಂದಿಗೆ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿಎಸ್ 33 ಐಎಂಎಂ 2022 ದಿನಾಂಕ:08.04.2022 ರಲ್ಲಿ ನೀಡಿರುವ ಸಹಮತಿಯೊಂದಿಗೆ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Shaheenparveen 11/04/2022

**(ಷಾಹೀನ್ ಪರ್ವೀನ್ ಕೆ )**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲಕರು,(ಎ ಮತ್ತು ಇ ಲೆಕ್ಕಪರಿಶೋಧನೆ-1 ಮತ್ತು 2) ಕರ್ನಾಟಕ ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ ಬೆಂಗಳೂರು.
4. ಖಜನಾಧಿಕಾರಿಗಳು, ರಾಜ್ಯ ಹುಜುರ್ ಖಜಾನೆ, ಬೆಂಗಳೂರು.

**ಪ್ರತಿ:-**

1. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು, ಯೋಜನೆ ಕಾರ್ಯಕ್ರಮ ಸಂಯೋಜನೆ, ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3&9) ವಿಧಾನಸೌಧ, ಬೆಂಗಳೂರು.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

***********